ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301
e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 22.09.2023

ಸಂಖ್ಯೆ:ಜಿಎಲ್5/98(2)/2022–23

## ಸುತ್ತೋಲೆ

ವಿಷಯ: **"ಬಾಪೂಜಿ ಪ್ರಬಂಧ ಸ್ಪರ್ಧೆ"**ಗೆ ಪ್ರಬಂಧಗಳನ್ನು ಕಳುಹಿಸುವ ಬಗ್ಗೆ.

ಉಲ್ಲೇಖ:1.ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಉಪನಿರ್ದೇಶಕರ ಕಛೇರಿ, ವಾರ್ತಾಭವನ, ಧನ್ವಂತರಿ ರಸ್ತೆ, ಮೈಸೂರು ಇವರ ಪತ್ರ ಸಂಖ್ಯೆ:ವಾಸಾಸಂಇ/ಉನಿಕ/ಮೈ/ವಾ.ಸ/ 2022–23/287, ದಿನಾಂಕ:15.09.2023

2. ಸಂ:ವಾಸಾಸಂ/ಇಎಂಎಂ/ಇ/ಗಾಸೇಪ್ರ–ಪ್ರಸ್ಪರ್ಧೆ/2023–24/4880, ದಿನಾಂಕ:13–09–2023

*–*

ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಕ್ಷರು, ನಿರ್ದೇಶಕರು ಹಾಗೂ ಸ್ನಾತಕ ಕಾಲೇಜುಗಳ ಪ್ರಾಂಶುಪಾಲರು ಇವರಿಗೆ ತಿಳಿಸುವುದೇನೆಂದರೆ, ಉಲ್ಲೇಖ(1)ರ ಸುತ್ತೋಲೆ ಅನ್ವಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ **ಮಹಾತ್ಮ ಗಾಂಧೀಜಿಯವರ 154ನೇ ಜಯಂತಿಯ** ಅಂಗವಾಗಿ ಜಿಲ್ಲಾ ಮತ್ತು ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು. ಮೂರು ಅತ್ಯುತ್ತಮ ಪ್ರಬಂಧಗಳಿಗೆ ಜಿಲ್ಲಾ ಮಟ್ಟದಲ್ಲಿ ಮಹಾತ್ಮ ಗಾಂಧೀಜಿ ಜಯಂತಿ ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡುವುದರ ಜೊತೆಗೆ ಈ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಕಳುಹಿಸಲಾಗುತ್ತದೆ. ಆದ್ದರಿಂದ ಆಸಕ್ತಿಯುಳ್ಳ ವಿದ್ಯಾರ್ಥಿಗಳು ಈ ಕೆಳಕಂಡ 04 ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಿ **ದಿನಾಂಕ: 26.09.2023ರ ಒಳಗಾಗಿ "ಉಪನಿರ್ದೇಶಕರ ಕಛೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಭವನ, ಧನ್ವಂತರಿ ರಸ್ತೆ–570001" ಈ ವಿಳಾಸಕ್ಕೆ ಕಳುಹಿಸಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ:9480841229** ಸಂಪರ್ಕಿಸಬಹುದು, ಸದರಿ ಕಾರ್ಯಕ್ರಮದ ಸದುಪಯೋಗ ಪಡೆಯುವಂತೆ ಈ ಮೂಲಕ ತಿಳಿಸಲಾಗಿದೆ(ಪ್ರತಿ ಲಗತ್ತಿಸಿದೆ)

**ಪದವಿ ಹಾಗೂ ಸ್ನಾತಕೋತ್ತರ ವಿಭಾಗ**

1. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು
2. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ
4. ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು

ಉಪ ಕುಲಸಚಿವ(ಸಾಮಾನ್ಯ)

**ಇವರಿಗೆ:**

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು
2. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ,ಮೈಸೂರು
3. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯಭವನ, ಮಾನಸಗಂಗೋತ್ರಿ, ಮೈಸೂರು
4. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು –ಸದರಿ ಪತ್ರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
5. ಮಾನ್ಯ ಕುಲಪತಿ /ಕುಲಸಚಿವರ ಆಪ್ತಸಹಾಯಕರು, ಮೈವಿವಿ, ಮೈಸೂರು
6. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಉಪನಿರ್ದೇಶಕರಕಚೇರಿ, ವಾರ್ತಾಭವನ, ಧನ್ವಂತರಿರಸ್ತೆ, ಮೈಸೂರು--570001, ದೂರವಾಣಿ: 0821-2423251

ಸಂ:ವಾಸಾಸಂಇ/ಉನಿಕ/ಮೈ/ವಾ.ಸ/2022-23/287

ದಿನಾಂಕ: 15-09-2023

ಇವರಿಗೆ,

ಮಾನ್ಯ ಕುಲಸಚಿವರು

ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು

ಮೈಸೂರು ಜಿಲ್ಲೆ

ಕುಲಸಚಿವರ ಕಛೇರಿ
ಮೈ. ವಿ. ವಿ ಮೈಸೂರು
ಇಂದ ಸಂ. M-1431
19/9/23

ಮಾನ್ಯರೇ,

ವಿಷಯ: "ಬಾಪೂಜಿ ಪ್ರಬಂಧ ಸ್ಪರ್ಧೆ"ಗೆ ಪ್ರಬಂಧಗಳನ್ನು ಪದವಿ ಹಾಗೂ ಸ್ನಾತ್ತಕೋತ್ತರ ವಿಭಾಗಗಳಿಂದ ಕಳುಹಿಸುವ ಕುರಿತು

ಉಲ್ಲೇಖ: ಸಂ: ವಾಸಾಸಂ/ಇಎಂಎಂ/ಇ/ಗಾಸೇಪ್ರ-ಪ್ರಸ್ಪರ್ಧೆ/2023-24/4880 15 ದಿ: 13-9-2023

********

Ae

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿಯವರ 154ನೇ ಜಯಂತಿಯ ಅಂಗವಾಗಿ ಪ್ರೌಢಶಾಲೆ ವಿಭಾಗ/ಪದವಿ ಪೂರ್ವಶಿಕ್ಷಣ ವಿಭಾಗ ಹಾಗೂ ಪದವಿ-ಸ್ನಾತಕೋತ್ತರ ಪದವಿ ವಿಭಾಗ ಹೀಗೆ ಒಟ್ಟು ಮೂರು ಪ್ರತ್ಯೇಕ ವಿಭಾಗಗಳಲ್ಲಿ ಜಿಲ್ಲಾ ಮತ್ತು ರಾಜ್ಯಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಭಾಗಗಳಿಂದ ಆಯ್ಕೆಯಾಗುವ ಮೂರು ಅತ್ಯುತ್ತಮ ಪ್ರಬಂಧಗಳಿಗೆ ಜಿಲ್ಲಾ ಮಟ್ಟದಲ್ಲಿ "ಮಹಾತ್ಮ ಗಾಂಧೀಜಿ ಜಯಂತಿ ಸಮಾರಂಭದಲ್ಲಿ ಪ್ರಶಸ್ತಿಯನ್ನು ನೀಡುವುದರ ಜತೆಗೆ ಆ ಪ್ರಬಂಧಗಳನ್ನು ರಾಜ್ಯಮಟ್ಟದ ಸ್ಪರ್ಧೆಗೆ ಕೂಡ ಕಳುಹಿಸಲಾಗುತ್ತದೆ.

GL-5
19/9/23

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಸಮಿತಿಯು ಪ್ರಬಂಧಗಳನ್ನು ಆಯ್ಕೆ ಮಾಡಲಿದೆ. ಪ್ರಬಂಧ ಸ್ಪರ್ಧೆಯ ವಿಷಯ. ಆಯ್ಕೆ ವಿಧಾನ, ಪ್ರಬಂಧ ರಚನೆ ಮಾರ್ಗಸೂಚಿ ಹಾಗೂ ಬಹುಮಾನಗಳ ಕುರಿತು ವಿವರವಾದ ಮಾಹಿತಿಯನ್ನು ಪ್ರತ್ಯೇಕವಾಗಿ ಈ ಪತ್ರದ ಜತೆ ಲಗತ್ತಿಸಲಾಗಿದೆ.

**ಪದವಿ ಹಾಗೂ ಸ್ನಾತ್ತಕೋತ್ತರ ವಿಭಾಗ:**

1. ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು
2. ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು
3. ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ
4. ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು

ಪದವಿ-ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧಗಳನ್ನು ರಚಿಸಬೇಕು.

**ಬಹುಮಾನಗಳ ವಿವರ:**

ಪ್ರೌಢಶಾಲಾ/ಪದವಿಪೂರ್ವ/ಕಾಲೇಜು ಹಾಗೂ ಸ್ನಾತಕೋತ್ತರ ಮೂರು ಪ್ರತ್ಯೇಕ ವಿಭಾಗಗಳ ಪ್ರಬಂಧ ಸ್ಪರ್ಧೆ ವಿಜೇತರಾದವರಿಗೆ

- ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನಕ್ಕೆ ರೂ.3000/-: ದ್ವಿತೀಯ ಸ್ಥಾನಕ್ಕೆ ರೂ.2000/- ತೃತೀಯ ಸ್ಥಾನಕ್ಕೆ ರೂ. 1000/

- ರಾಜ್ಯಮಟ್ಟದಲ್ಲಿ- ಪ್ರಥಮ ಸ್ಥಾನಕ್ಕೆ ರೂ. 31,000/-: ದ್ವಿತೀಯ ಸ್ಥಾನಕ್ಕೆ ರೂ.21,000/- ತೃತೀಯ ಸ್ಥಾನಕ್ಕೆ ರೂ. 11,000/

**ಪ್ರಬಂಧ ರಚಿಸಲು ಮಾರ್ಗಸೂಚಿಗಳು:**

- ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು.
- ಶುದ್ಧ ಕೈಬರಹ ಅಥವಾ ನುಡಿ ಇಲ್ಲವೇ ಯುನಿಕೋಡ್ ತಂತ್ರಾಂಶದಲ್ಲಿ ಬೆರಳಚ್ಚು ಮಾಡಿರಬೇಕು. ಆಕರವಾಗಿ ಬಳಸಿದ ಪರಾಮರ್ಶನ/ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು.
- ಪ್ರಬಂಧಕಾರರ ಹೆಸರು, ವಿಳಾಸ, ನಮೂದಿಸರಬೇಕು.
- ಶಾಲೆ/ಕಾಲೇಜುಗಳು ಹಾಗೂ ಸಂಬಂಧಿಸಿದ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರುಗಳ ಮೂಲಕವೇ ಜಿಲ್ಲಾ ವಾರ್ತಾಧಿಕಾರಿಗಳಿಗೆ ಪ್ರಬಂಧಗಳನ್ನು ತಲುಪಿಸಬೇಕು.
- ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು.
- ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ವಿದ್ಯಾರ್ಥಿಗಳು ರಚಿಸಿದ ಪ್ರಬಂಧಗಳನ್ನು ತಮ್ಮ ವ್ಯಾಪ್ತಿಯ ಎಲ್ಲಾ ಪದವಿ ಹಾಗೂ ಸ್ನಾತ್ತಕೋತ್ತರ ಕಾಲೇಜುಗಳ ಮೂಲಕ ದಿನಾಂಕ: 26-09-2023 ರ ಒಳಗಾಗಿ "ಉಪ ನಿರ್ದೇಶಕರ ಕಛೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ. ವಾರ್ತಾಭವನ, ಧನ್ವಂತರಿ ರಸ್ತೆ-570001" ಈ ವಿಳಾಸಕ್ಕೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ- 9480841229 ಸಂಪರ್ಕಿಸಬಹುದು.

ಸಮಯಾವಕಾಶ ಕಡಿಮೆ ಇರುವುದರಿಂದ ಕೂಡಲೇ ತಮ್ಮ ವ್ಯಾಪ್ತಿಯ ಎಲ್ಲಾ ಪದವಿ ಹಾಗೂ ಸ್ನಾತ್ತಕೋತ್ತರ ಕಾಲೇಜುಗಳಿಗೆ ಸುತ್ತೋಲೆಯನ್ನು ಕಳುಹಿಸುವ ಮೂಲಕ ನಿಗದಿತ ಅವಧಿಯಲ್ಲಿ ಪ್ರಬಂಧಗಳನ್ನು ಕಳುಹಿಸಿಕೊಡಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ತಮ್ಮಲ್ಲಿ ಕೋರುತ್ತೇನೆ.

**ತಮ್ಮ ವಿಶ್ವಾಸಿ**

Ashok 15/9/23

**(ಅಶೋಕ್ ಕುಮಾರ್ ಡಿ)**

**ಉಪನಿರ್ದೇಶಕರು**

**1. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಮೈಸೂರು ಇವರ ಮಾಹಿತಿಗಾಗಿ ಆದರ ಪೂರ್ವಕವಾಗಿ ಸಲ್ಲಿಸಿದೆ.**